**B.L.D.E. Association's**

S.B. Arts And K.C.P. Science College

Vijayapur

# "DEPARTMENT OF HISTORY"

## One Day Study Tour

Date : 07-02-2019

Scanned by TapScanner

## HISTORY DEPARTMENT EDUCATIONAL TOUR REPORT 2018-19

B.L.D.E.Association by S.B.Arts & K.C.P. Science college ,Vijayapur by the history department on the consent of Dr.K.G.Pujari senior principal of the college date 7- 2 - 2019 a one day education tour was under taken the guidance of a teacher Prof. R. R. Utagi and Prof. I . S. Hugar .

The report was prepared by visiting 30 students of the department together with professor at the touring site Hampi.

Thank you to the professors and given faculty of the college who helped us with this educational tour.

HOD
Dept. of History
.B.Arts & K.C.P. Science College,
Vijayapura.

IQAC, Co-ordinator
S.B.Arts & K.C.P.Science College,
Vijayapur.

Principal,
S. B. Arts & KCP Sc. College.
Bijapur

Scanned by TapScanner

## B.L.D.E.A's
## S B Arts & K C P Science college Vijayapur-586101

### "Department Of HISTORY Study Tour-2019"

| SL.No | STUDENTS NAME | MOB.NO | SIGN |
|---|---|---|---|
| 1 | Revanasidda Byali | 7676966708 | |
| 2 | Durgesh Madar | 9380778503 | |
| 3 | Sandeep Chavhan | 7760862192 | |
| 4 | Shreemant Chavhan | 7795427217 | |
| 5 | Mahesh Gurav | 9538624152 | |
| 6 | Sagar Pujari | 9986915611 | |
| 7 | Shreenivas Kapatakar | 9900518292 | |
| 8 | Hajimastan Kattimani | 9742507875 | |
| 9 | Sunil Patil | 9108499894 | |
| 10 | Kenchappa Chalvadi | 9606754052 | |
| 11 | Sahebagoud Byakod | 8217783593 | |
| 12 | Raju Kale | 8217562195 | |
| 13 | Sandeep Bandivaddar | 9739354423 | |
| 14 | Pooja Jambagi | 8861151453 | |
| 15 | Priyanka Madabavi | 6362180342 | |
| 16 | Babu Kharat | 9686934969 | |
| 17 | Manju Kumbar | 8150817502 | |
| 18 | Sanju Kumbar | 8150093970 | |
| 19 | Manjunath Rathod | 7760133233 | |
| 20 | Madhusudhan Kannur | 9880719199 | |
| 21 | Savitri Khate | 8970343049 | |
| 22 | Shilpa Rathod | 9482677959 | |
| 23 | Shobha Malipatil | 9108042411 | |
| 24 | Anil Bandagar | 7353480790 | |
| 25 | Preeti Kabadagi | 6361249314 | |
| 26 | Jyoti Chavhan | 7022034163 | |
| 27 | Dhaneshwari Pawar | 9108154093 | |
| 28 | Achala Arakeri | 6360168439 | |

| SL.No | Prof. Name | MOB.NO | SIGN |
|---|---|---|---|
| 1 | Prof. R R Utagi | 9902384355 | |
| 2 | Prof. I S Hugar | 9945429110 | |
| 3 | Prof. K M Lamani | 9900764341 | |

Scanned by TapScanner

# ಪರಿವಿಡಿ


| ಕ್ರಮ ಸಂಖ್ಯೆ | ವಿಷಯ | ಪುಟ ಸಂಖ್ಯೆ |
|---|---|---|
| 1 | ಚರಿತ್ರೆ | 1 |
| 2 | ಪವಿತ್ರ ಕೇಂದ್ರ | 1 |
| 3 | ವಿರೂಪಾಕ್ಷ ದೇವಾಲಯ | 1 |
| 4 | ಕೃಷ್ಣ ದೇವಾಲಯ | 1 |
| 5 | ಉಗ್ರ ನರಸಿಂಹ | 2 |
| 6 | ಸುಗ್ರೀವನ ಗುಹೆ | 2 |
| 7 | ಕೋದಂಡರಾಮ ದೇವಸ್ಥಾನ | 2 |
| 8 | ವಿಠ್ಠಲ ದೇವಸ್ಥಾನ | 2 |
| 9 | ರಾಜ ಕೇಂದ್ರ | 2 |
| 10 | ರಾಮಚಂದ್ರ ದೇವಸ್ಥಾನ | 2 |
| 11 | ಲೋಟಸ್ ಮಹಲ್ | 3 |
| 12 | ಪುಷ್ಕರಿಣಿ | 3 |
| 13 | ಆನೆ ಲಾಯಗಳು | 3 |
| 14 | ಹಂಪೆ ಹಾಗು ಸುತ್ತಮುತ್ತಲಿರುವ ಕೆಲವು ಮುಖ್ಯ ಸ್ಮಾರಕಗಳು | 3 |
| 15 | ಬಡವಿ ಲಿಂಗ | 4 |
| 16 | ಸಾಸುವೆಕಾಳು ಗಣೇಶ | 4 |
| 17 | ಆನೆಗೊಂದಿ (ಆನೆಗುಂಡಿ) | 4 |
| 18 | ಕಮಲಾಪುರದಲ್ಲಿರುವ ಪ್ರಾಚ್ಯವಸ್ತು ಸಂಗ್ರಹಾಲಯ | 5 |
| 19 | ಮಹಾನವಮಿ ದಿಬ್ಬ | 6 |
| 20 | ಶೈಕ್ಷಣಿಕ ಪ್ರವಾಸಕ್ಕೆ ಹೋಗಿರುವ ಕೆಲವು ಪೂರಕ ಚಿತ್ರಗಳು | 7– |


Scanned by TapScanner

## 1) ಚರಿತ್ರೆ

ಹಿಂದೂ ವಿಜಯನಗರ ಸಾಮ್ರಾಜ್ಯ ೧೩೩೬ ರಲ್ಲಿ ಹಕ್ಕ (ನಂತರ ಹರಿಹರ) ಮತ್ತು ಬುಕ್ಕ (ನಂತರ ಬುಕ್ಕ ರಾಯ) ಎಂಬ ಅಣ್ಣತಮ್ಮಂದಿರಿಂದ ಸ್ಥಾಪಿಸಲ್ಪಟ್ಟಿತ್ತು. ಅವರ ಮೂಲ ಸ್ಥಾನ ಇದೇ ಕ್ಷೇತ್ರದಲ್ಲೇ ಇತ್ತೆಂದು ತಿಳಿದುಬಂದಿದೆ. ರಾಜಧಾನಿ ಮೊದಲು ಪ್ರಾಯಶಃ ತುಂಗಭದ್ರಾ ನದಿಯ ಉತ್ತರದಲ್ಲಿ ವಿಠ್ಠಲ ದೇವಸ್ಥಾನದ ಬಳಿ ಇರುವ ಆನೆಗೊಂಡಿ ಎಂಬ ಗ್ರಾಮದಲ್ಲಿತ್ತು. ಸಾಮ್ರಾಜ್ಯ ಬೆಳೆಯುತ್ತಾ ಸಮೃದ್ಧವಾದಂತೆ ರಾಜಧಾನಿಯನ್ನು ತುಂಗಭದ್ರೆಯ ದಕ್ಷಿಣದಲ್ಲಿರುವ ಹೆಚ್ಚು ಸುರಕ್ಷಿತ ವಿಜಯನಗರಕ್ಕೆ ವರ್ಗಾಯಿಸಲಾಯಿತು.

ನಗರ ೧೪ನೇ ಶತಮಾನದಿಂದ ೧೬ ನೇ ಶತಮಾನದ ವರೆಗೆ ಉಚ್ಛ್ರಾಯ ಸ್ಥಿತಿಯಲ್ಲಿತ್ತು, ವಿಜಯನಗರ ಸಾಮ್ರಾಜ್ಯದ ಶಕ್ತಿಯ ತುಟ್ಟತುದಿಯಲ್ಲಿ. ಇದೇ ಸಮಯದಲ್ಲಿ ಅದು ಕಾಲಕಾಲಕ್ಕೆ ಉತ್ತರ ದಖಿನ್ ಪ್ರದೇಶದಲ್ಲಿ ಇದ್ದು ಒಟ್ಟಾಗಿ **ದಖಿನ್ ಸುಲ್ತಾನೇಟ್** ಎಂದು ಕರೆಯಲ್ಪಟ್ಟ ಮುಸ್ಲಿಮ್ ರಾಜ್ಯಗಳೊಂದಿಗೆ ಘಟ್ಟಿಸುತ್ತಿತ್ತು. ೧೫೬೫ ರಲ್ಲಿ ನಗರ ಅಂತಿಮವಾಗಿ ಈ ಸುಲ್ತಾನೇಟ್‌ಗಳ ಮೈತ್ರಿತ್ವಕ್ಕೆ ಸೋತಿತು ಮತ್ತು ರಾಜಧಾನಿಯನ್ನು ವಶಪಡಿಸಿಕೊಳ್ಳಲಾಯಿತು. ಜಯ ಪಡೆದ ಸೈನಿಕರು ಅನೇಕ ತಿಂಗಳುಗಳ ಕಾಲ ವಿಜಯನಗರದಲ್ಲಿ ಕೊಲೆ, ಲೂಟಿ ನಡೆಸಿದರು. ಇದರ ನಂತರವೂ ವಿಜಯನಗರ ಸಾಮ್ರಾಜ್ಯ ಉಳಿದರೂ ಸಹ ಅದು ನಿಧಾನವಾಗಿ ಕೆಳಮುಖವಾಯಿತು. ರಾಜಧಾನಿಯಾಗಿದ್ದ ವಿಜಯನಗರವನ್ನು ಪುನರ್ನಿರ್ಮಾಣ ಮಾಡಲಾಗಲಿಲ್ಲ. ಇಂದಿನ ವರೆಗೂ ಅಲ್ಲಿ ಜನವಸತಿಯಿಲ್ಲ.

ಅಂದಿನ ಮುಸ್ಲಿಮ್ ರಾಜ್ಯಗಳ ಸಂಪರ್ಕದ ಪರಿಣಾಮವಾಗಿ ವಿಜಯನಗರದ ಕಟ್ಟಡಗಳಲ್ಲಿ ಮುಸ್ಲಿಮ್ ಪ್ರಭಾವವನ್ನು ಸ್ವಲ್ಪ ಮಟ್ಟಿಗೆ ಕಾಣಬಹುದು.

## 2) ಪವಿತ್ರ ಕೇಂದ್ರ

ಹಂಪೆ ಗ್ರಾಮದಿಂದ ಪೂರ್ವಕ್ಕೆ ಮಾತಂಗ ಪರ್ವತದ ವರೆಗೆ ಹಬ್ಬಿರುವ ಪ್ರದೇಶಕ್ಕೆ ಈ ಹೆಸರು. ಕೆಲವರ ಅಭಿಪ್ರಾಯದಂತೆ ವಿಠ್ಠಲ ದೇವಸ್ಥಾನದ ಪ್ರದೇಶವೂ ಇದಕ್ಕೆ ಸೇರುತ್ತದೆ.

## 3) ವಿರೂಪಾಕ್ಷ ದೇವಾಲಯ

ಉಳಿದಿರುವ ಈ ದೇವಾಲಯ ಮತ್ತು ಅದರ ಆವರಣ ಹಂಪೆ ಗ್ರಾಮದ ಮುಖ್ಯ ಭಾಗ. ಇದಕ್ಕೆ ಪಂಪಾಪತಿ ದೇವಸ್ಥಾನ ಎಂದೂ ಹೆಸರು. ೧೩ನೇ ಶತಮಾನದಿಂದ ೧೭ನೇ ಶತಮಾನದ ನಡುವೆ ಇದನ್ನು ಕಟ್ಟಿ ಬೆಳೆಸಲಾಯಿತು. ಈ ದೇವಸ್ಥಾನದಲ್ಲಿ ಎರಡು ಆವರಣಗಳು ಮತ್ತಿ ಗೋಪುರಗಳು ಇವೆ. ಇದರ ಎದುರು ಇರುವ ರಸ್ತೆ ಪೂರ್ವಕ್ಕೆ ಅರ್ಧ ಮೈಲು ಸಾಗುತ್ತದೆ, ನಂದಿಯ ಒಂದು ಶಿಲ್ಪದತ್ತ.

ಈ ದೇವಸ್ಥಾನ ಇಂದೂ ಸಹ ಉಪಯೋಗದಲ್ಲಿದೆ. ಶಿವನ ಒಂದು ರೂಪವಾದ ವಿರೂಪಾಕ್ಷ ಮತ್ತು ಪಂಪಾ ಎಂಬ ಸ್ಥಳೀಯ ದೇವತೆಯ ದೇವಾಲಯ ಇದು.

## 4) ಕೃಷ್ಣ ದೇವಾಲಯ

ಇದು ಹಂಪೆಯ ದಕ್ಷಿಣದಲ್ಲಿ ಈಗ ಪಾಳು ಬಿದ್ದಿರುವ ದೇವಸ್ಥಾನ. ಒರಿಸ್ಸಾದಲ್ಲಿ ದಂಡಯಾತ್ರೆಯ ನಂತರ ಕೃಷ್ಣದೇವರಾಯ ಕಟ್ಟಿಸಿದ ದೇವಾಲಯ. ಇದರ ಕೆಲವು ಭಾಗಗಳು ಮತ್ತು ಆವರಣ ಈಗ ಕುಸಿದಿವೆ.

Scanned by TapScanner

## 5) ಉಗ್ರ ನರಸಿಂಹ

ಹಂಪೆಯ ದಕ್ಷಿಣದಲ್ಲೇ ಸುಮಾರು ೨೦ ಅಡಿ ಎತ್ತರದ ಬೃಹತ್ ಗಾತ್ರದ ಕಲ್ಲಿನಲ್ಲಿ ಕೆತ್ತಿದ ವಿಷ್ಣುವಿನ ಉಗ್ರರೂಪವಾದ ಉಗ್ರ ನರಸಿಂಹನ ಮೂರ್ತಿ ಇದೆ. ಇದನ್ನು ಇತ್ತೀಚೆಗೆ ಪುನಶ್ಚೇತನಗೊಳಿಸಲಾಗಿದೆ; ಮೂರ್ತಿಯ ಮಂಡಿಯ ಬಳಿ ಇರುವ ಜಲ್ಲಿಕಲ್ಲಿನ ಪಟ್ಟಿ ಅದಕ್ಕೆ ಭದ್ರತೆಯನ್ನು ಒದಗಿಸುತ್ತದೆ. ಈ ಮೂರ್ತಿಯ ಕೆತ್ತನೆ ಕೃಷ್ಣದೇವರಾಯನಿಂದ ಅಥವಾ ಅದೇ ಕಾಲದ ಓರ್ವ ಶ್ರೀಮಂತ ವರ್ತಕರಿಂದ ಸಂದ ಧನಸಹಾಯದಿಂದ ಆದದ್ದೆಂದು ನಂಬಲಾಗಿದೆ.

ಕಟ್ಟಿದಾಗ ಮೂರ್ತಿಯ ಮಂಡಿಯ ಮೇಲೆ ಒಂದು ಸಣ್ಣ ಲಕ್ಷ್ಮಿಯ ಮೂರ್ತಿ ಸಹ ಇತ್ತು; ಇದು ಪ್ರಾಯಶಃ ಲೂಟಿಯ ಪರಿಣಾಮವಾಗಿ ಬಿದ್ದು ಹೋಗಿದೆ. ಈ ಮೂರ್ತಿ ಈಗ ಕಮಲಾಪುರದ ವಸ್ತು ಸಂಗ್ರಹಾಲಯದಲ್ಲಿ ಇದೆ.

## 6) ಸುಗ್ರೀವನ ಗುಹೆ

ಇದು ಒಂದು ಪ್ರಾಕೃತಿಕ ಗುಹೆ, ಇಲ್ಲಿಯೇ ಶ್ರೀರಾಮ ಹನುಮಂತನನ್ನು ಮತ್ತು ಸುಗ್ರೀವನನ್ನು ಭೇಟಿಯಾದ ಎಂಬ ನಂಬಿಕೆ ಪ್ರಚಲಿತವಾಗಿದೆ. ಗುಹೆಯಲ್ಲಿ ಬಣ್ಣದ ಗುರುತುಗಳು ಮತ್ತು ತೀರ್ಥಯಾತ್ರಿಗಳ ಗುರುತುಗಳು ಕಾಣಬರುತ್ತವೆ.

## 7) ಕೋದಂಡರಾಮ ದೇವಸ್ಥಾನ

ಹಂಪೆಯ ಪೂರ್ವಕ್ಕೆ ಇದ್ದು, ಪವಿತ್ರ ಕೇಂದ್ರದ ನಡುವೆ ತುಂಗಭದ್ರೆಯ ಒಂದು ತಟದಲ್ಲಿ ಇರುವ ದೇವಸ್ಥಾನ. ಈ ದೇವಸ್ಥಾನ ಶ್ರೀರಾಮ ಸುಗ್ರೀವನಿಗೆ ಪಟ್ಟ ಕಟ್ಟಿದ ಸ್ಥಳವೆಂಬ ಪ್ರತೀತಿ ಇದೆ. ಈ ದೇವಸ್ಥಾನ ಸಹ ಇನ್ನೂ ಉಪಯೋಗದಲ್ಲಿದೆ.

## 8) ವಿಠ್ಠಲ ದೇವಸ್ಥಾನ

ಹಂಪೆಯ ಉತ್ತರ ಪೂರ್ವಕ್ಕೆ, ಆನೆಗೊಂಡಿಯ ಎದುರು ವಿಜಯನಗರದ ಪ್ರಮುಖ ಸ್ಮಾರಕಗಳಲ್ಲೊದಾದ ವಿಜಯವಿಠ್ಠಲ ದೇಗುಲವಿದೆ. ವಿಠ್ಠಲ ಮಹಾರಾಷ್ಟ್ರದಲ್ಲಿ ಪ್ರಚಲಿತವಾಗಿರುವ ವಿಷ್ಣುವಿನ ಒಂದು ರೂಪ. ಇದನ್ನು ೧೬ನೇ ಶತಮಾನದಲ್ಲಿ ಕಟ್ಟಲಾಯಿತೆಂದು ನಂಬಲಾಗಿದೆ. ಈ ದೇವಸ್ಥಾನದ ಎದುರು ಪ್ರಸಿದ್ಧ ಕಲ್ಲಿನ ರಥವಿದೆ. ಇದೇ ಒಂದು ಪುಟ್ಟ ದೇವಸ್ಥಾನವೂ ಹೌದು, ಒಂದೇ ಕಲ್ಲಿನಲ್ಲಿ ಕಡೆಯಲಾಗಿದೆ, ಮತ್ತು ಬೀದಿಗಳಲ್ಲಿ ರಥಯಾತ್ರೆ ಹೊರಡುವ ದೇವಸ್ಥಾನಗಳ ರಥಗಳನ್ನು ಹೋಲುತ್ತದೆ. ಹಿಂದೆ ಇದರ ಮೇಲೆ ಸುಂದರವಾದ ಗೋಪುರ ಇತ್ತು, ಆದರೆ ಇಂದು ಅದು ಇಲ್ಲದಂತಾಗಿ ಈ ಕಲ್ಲಿನ ರಥದ ಕಳೆಗುಂದಿದೆ.

## 9) ರಾಜ ಕೇಂದ್ರ

ಈ ವಿಶಾಲ ಪ್ರದೇಶ ಹಂಪೆಯ ದಕ್ಷಿಣಪೂರ್ವದಲ್ಲಿ ೨ ಕಿಮೀ ದೂರದಲ್ಲಿ ಆರಂಭವಾಗಿ ಸುಮಾರು ಕಮಲಾಪುರಮ್ ಗ್ರಾಮದ ವರೆಗೆ ಹಬ್ಬಿದೆ. ಈ ಪ್ರದೇಶದಲ್ಲಿ ಅರಮನೆಗಳ ಅವಶೇಷಗಳು, ಆಡಳಿತ ಕಟ್ಟಡಗಳು ಮತ್ತು ರಾಜಮನೆತನಕ್ಕೆ ನೇರವಾಗಿ ಸಂಬಂಧಪಟ್ಟ ಕೆಲವು ದೇವಸ್ಥಾನಗಳಿವೆ. ಅಡಿಪಾಯಗಳನ್ನು ಬಿಟ್ಟರೆ ಅರಮನೆಗಳ ಹೆಚ್ಚು ಅವಶೇಷಗಳು ಉಳಿದಿಲ್ಲ - ಮುಖ್ಯವಾಗಿ ಅರಮನೆಗಳು ಮರದ ದಿಮ್ಮಿಗಳಿಂದ ಕಟ್ಟಲ್ಪಟ್ಟಿದ್ದರಿಂದ. ದೇಗುಲಗಳು ಮತ್ತಿತರ ಕಲ್ಲಿನ ಕಟ್ಟಡಗಳು ಉಳಿದಿವೆ, ಸುತ್ತಲ ಕೋಟೆ ಗೋಡೆಗಳೊಂದಿಗೆ.

## 10) ರಾಮಚಂದ್ರ ದೇವಸ್ಥಾನ

ರಾಮನ ಅನೇಕ ಪ್ರತಿಮೆಗಳು ಕಂಡುಬರುವುದರಿಂದ ಇದಕ್ಕೆ ಹಜಾರರಾಮ ದೇವಸ್ಥಾನ ಎಂದೂ ಹೆಸರು (ಸಾವಿರ ರಾಮರ ದೇವಸ್ಥಾನ).ಇದು ಹಂಪೆಯ ದಕ್ಷಿಣಪೂರ್ವದಲ್ಲಿ ರಾಜಕೇಂದ್ರದಲ್ಲಿ ಇದೆ.

Scanned by TapScanner

## 11) ಲೋಟಸ್ ಮಹಲ್

ಇದು ಮಹಾರಾಣಿಯವರ ಅರಮನೆಯಾಗಿತ್ತು. ಇದರಲ್ಲಿ ಹರಿಯುವ ನೀರಿನ ಸೌಕರ್ಯವನ್ನೊಳಗೊಂಡಂತೆ ಅನೇಕ ವಿಶೇಷ ಪರಿಸರ ನಿಯಂತ್ರಣ ಉಪಕರಣಗಳಿವೆ.

## 12) ಪುಷ್ಕರಿಣಿ

ಇದು ಒಂದು ಮೆಟ್ಟಲುಗಳುಳ್ಳ ವಿಶಾಲವಾದ ಬಾವಿ, ಸ್ನಾನ ಮಾಡುವುದಕ್ಕೆ ರಚಿಸಲಾದದ್ದು. ಹಗಲಿನ ಬಿಸಿಲಿನ ಬೇಗೆಯಿಂದ ಈ ರೀತಿಯ ಬಾವಿಗಳು ಆರಾಮವನ್ನು ತರುತ್ತಿದ್ದವು. ನಗರದಲ್ಲಿ ಜನವಸತಿಯಿದ್ದಾಗ ಪ್ರಾಯಶಃ ಈ ಬಾವಿ ಶಾಮಿಯಾನಗಳಿಂದ ಆವೃತವಾಗಿರುತ್ತಿತ್ತು.

## 13) ಆನೆ ಲಾಯಗಳು

ವಿಶಾಲವಾದ ಆನೆಲಾಯಗಳ ಗುಂಪು ರಾಜಮನೆತನದ ಆನೆಗಳನ್ನು ಸಾಕುವುದಕ್ಕೆ ಮೀಸಲಾಗಿತ್ತು. ಈ ಲಾಯಗಳ ಎದುರು ಇದ್ದ ಪ್ರದೇಶ ಆನೆಗಳ ಮತ್ತು ಸೈನಿಕರ ಪ್ರಭಾತಭೇರಿಗಾಗಿ ಉಪಯೋಗಿಸಲ್ಪಡುತ್ತಿತ್ತು.

## 14) ಹಂಪೆ ಹಾಗು ಸುತ್ತಮುತ್ತಲಿರುವ ಕೆಲವು ಮುಖ್ಯ ಸ್ಮಾರಕಗಳು

ಮೊದಲಿಗೆ ಹಂಪಿಗೆ ಬಂದಾಗ ಇಲ್ಲಿನ ಅನೇಕ ಸ್ಮಾರಕಗಳನ್ನು ನೋಡಿ ಗಲಿಬಿಲಿಯುಂಟಾಗುವುದು ಸಹಜ. ಆದ್ದರಿಂದ ಇಲ್ಲಿನ ಸ್ಮಾರಕಗಳನ್ನು ಮತ್ತು ಇಲ್ಲಿರುವ ದೇವಸ್ಥಾನಗಳನ್ನು ನೋಡಲು ಸುಲಭವಾಗುವಂತೆ ಹಲವು ಭಾಗಗಳನ್ನಾಗಿ ವಿಂಗಡಿಸಲಾಗಿದೆ. ಅವೆಂದರೆ-

ಕೇಂದ್ರವಾದ ಶ್ರೀ ವಿರೂಪಾಕ್ಷೇಶ್ವರ ದೇವಸ್ಥಾನ.

ನಡೆದು ನೋಡಬಹುದಾದ ದಾರಿ.

ವಾಹನಗಳಲ್ಲಿ ಸಂಚರಿಸಿ ನೋಡಬಹುದಾದ ದಾರಿ.

ಸೂರ್ಯಾಸ್ತದ ಸ್ಥಳಗಳು.

ಅಚ್ಯುತರಾಯ ದೇಗುಲ

ಆನೆಗೊಂದಿ

ಅಂಜನಾದ್ರಿ ಪರ್ವತ

ವಿರೂಪಾಕ್ಷೇಶ್ವರ ದೇವಾಲಯ

ತುಂಗಭದ್ರ ನದಿ

ಪುರಂದರ ಮಂಟಪ

ವಿಜಯವಿಠ್ಠಲ ದೇಗುಲ

ಕಲ್ಲಿನ ತೇರು

ಉಗ್ರ ನರಸಿಂಹ

ಕಡಲೆಕಾಳು ಗಣಪತಿ

Scanned by TapScanner

ಸಾಸಿವೆಕಾಳು ಗಣಪತಿ

ರಾಣಿ ಸ್ನಾನಗೃಹ

ಹಂಪೆ ಬಜಾರ್

ಹೇಮಕೂಟ

## 15) ಬಡವಿ ಲಿಂಗ

೯ ಅಡಿಯ ದೇವಸ್ಥಾನವಾಗಿದ್ದು, ಲಕ್ಷ್ಮಿನರಸಿಂಹ ದೇವಸ್ಥಾನದ ಸಮೀಪವೆ ಕಾಣಸಿಗುತ್ತದೆ. ಇದರ ವಿಶಿಷ್ಟತೆಯೆಂದರೆ, ಇದು ಒಂದು ಪ್ರಾಚೀನ ಕಾಲುವೆಯ ಮುಖಾಂತರ ಹರಿದು ಬರುವ ನೀರಿನಿಂದ ಸದಾಕಾಲ ಆವೃತವಾಗಿರುತ್ತದೆ. ಈ ಲಿಂಗದಲ್ಲಿ ಮೂರು ಕಣ್ಣುಗಳನ್ನು ಕೆತ್ತಲಾಗಿದ್ದು, ಭಗವಾನ ಶಿವನ ಮೂರು ನೇತ್ರಗಳನ್ನು ಪ್ರತಿನಿಧಿಸುತ್ತದೆ. ಇದು ಕೂಡ ಭೇಟಿ ಕೊಡಬಹುದಾದಂತಹ ಸ್ಥಳವಾಗಿದೆ. ಸ್ಥಳೀಯರ ನಂಬಿಕೆ ಪ್ರಕಾರ, ಹಂಪಿ ಎಂಬ ಬಡ ಬುಡಕಟ್ಟು ಜನಾಂಗದವನೊಬ್ಬ ತನ್ನ ಆಸೆಗಳನ್ನು ಈಡೇರಿಸಿದರೆ ಒಂದು ಶಿವಲಿಂಗವನ್ನು ಕಟ್ಟುತ್ತೆನೆಂದು ಮಾತು ಕೊಡುತ್ತಾನೆ. ಇದನ್ನರಿತ ಪರಮೇಶ್ವರನು ಅವನ ಆಸೆಗಳನ್ನು ಈಡೇರಿಸಲು ನಿರ್ಧರಿಸಿದ. ತದನಂತರ ಆ ಭಕ್ತನು ಈ ಬಡವಲಿಂಗವನ್ನು ನಿರ್ಮಿಸಿ ಈಶ್ವರನಿಗೆ ಅರ್ಪಿಸಿದ. ಇನ್ನೊಂದು ದಂತಕಥೆಯ ಪ್ರಕಾರ,ಈ ಲಿಂಗವು ಒಬ್ಬ ರೈತ ಮಹಿಳೆಯಿಂದ ನಿರ್ಮಿತವಾಗಿದ್ದು, ಅದಕ್ಕವಳು ಬಡವಿಲಿಂಗ ಎಂದು ನಾಮಕರಣ ಮಾಡಿದ್ದಳು ಎಂದು.

## 16) ಸಾಸುವೆಕಾಳು ಗಣೇಶ

ಹೇಮಕೂಟ ಬೆಟ್ಟದ ಕೆಳಗಿರುವ ಸಾಸಿವೆಕಾಳು ಗಣೇಶ ಗುಡಿಗೆ ಭೇಟಿ ನೀಡಲೇ ಬೇಕು. ಸಾಸಿವೆ ಕಾಳುಗಳನ್ನು ನೆನಪಿಗೆ ತರುವಂತಹ, ಇಲ್ಲಿರುವ ಜನಪ್ರೀಯ ಗಣಪತಿ ವಿಗ್ರಹವು ೮ ಅಡಿ ಉದ್ದವಾಗಿದೆ. ಆದ್ದರಿಂದ ಭಕ್ತ ಸಮೂಹದಲ್ಲಿ, ಇದು ಸಾಸಿವೆಕಾಳು ಗಣೇಶನೆಂಬ ಹೆಸರಿನಿಂದಲೂ ಚಿರಪರಿಚಿತವಾಗಿದೆ. ಪುರಾಣದ ಪ್ರಕಾರ, ಒಮ್ಮೆ ಭಗವಾನ ಗಣೇಶನು, ಮಿತಿ ಮಿರಿ ತಿಂದಿದ್ದರ ಪರಿಣಾಮ ಹೊಟ್ಟೆ ಒಡೆಯುವಂತಾಗಿ, ಅದನ್ನು ತಡೆಲು ಸರ್ಪವನ್ನು ಹೊಟ್ಟೆಗೆ ಅಡ್ಡಲಾಗಿ ಸುತ್ತಿಕೊಂಡನೆಂಬುದು ಪ್ರತೀತಿ. ವಿಗ್ರಹವು ಒಂದೆ ಕಲ್ಲಿನಲ್ಲಿ ಕೆತ್ತಲ್ಪಟ್ಟಿದ್ದು, ಬಲಗೈಯಲ್ಲಿ ಮುರಿದ ಆನೆಯ ದಂತ ಮತ್ತು ಅಂಕುಶವನ್ನು ಕಾಣಬಹುದು.ಮೊದಲನೆ ಎಡಗೈ ವಂಕಿಯಾಕರದ ಪಾಶವನ್ನು ಹೊಂದಿದ್ದು, ಎರಡನೆ ಎಡಗೈಯ ಮತ್ತು ಸೊಂಡಿಲು ಕಲ್ಲಿನಿಂದ ಬೇರ್ಪಡಿಸಿ ಕೆತ್ತಲಾಗಿದೆ. ಸಾಸಿವೆ ಕಾಳು ಗಣೇಶ ಗುಡಿಯನ್ನು ತಲುಪಿದಾಗ, ವಿಗ್ರಹವು ವಿಶಾಲವಾದ ಆವರಣವನ್ನು ಹೊಂದಿರುವದು ಕಾಣಬಹುದು. ಅಲ್ಲಿ ಕೆತ್ತಲಾಗಿರುವ ಮಾಹಿತಿಯ ಪ್ರಕಾರ, ಇದನ್ನು ಚಂದ್ರಗಿರಿಯ ವ್ಯಾಪರಿಯೊಬ್ಬನು ಕ್ರಿ.ಶ.1506 ರಲ್ಲಿ ವಿಜಯನಗರ ಸಾಮ್ರಾಜ್ಯದ ದೊರೆಯಾದ ಎರಡನೇ ನರಸಿಂಹನಿಗೋಸ್ಕರ ಕಟ್ಟಿದನೆಂಬದು ತಿಳಿದು ಬರುತ್ತದೆ.

## 17) ಆನೆಗೊಂದಿ (ಆನೆಗುಂಡಿ)

ಆನೆಗುಂಡಿ ಹಳ್ಳಿಯು ಹಂಪಿಯಿಂದ ೧೦ ಕಿ.ಮೀ ದೂರದಲ್ಲಿದ್ದು, ತುಂಗಭದ್ರಾ ನದಿಯ ಉತ್ತರ ಭಾಗದ ದಡದಲ್ಲಿದೆ. ಇದು ಅಂದಿನ ವಿಜಯನಗರ ಸಾಮ್ರಾಜ್ಯದ ಪ್ರಾದೇಶಿಕ ರಾಜಧಾನಿಯಾಗಿತ್ತು. ಇದರ ಅರ್ಥ ಕನ್ನಡದಲ್ಲಿ ಆನೆಗೆ ತೋಡಿದ ಗುಂಡಿ ಎಂದಾಗುತ್ತದೆ. ಈ ಪ್ರದೇಶವು ಹಂಪಿಗಿಂತಲೂ ಪ್ರಾಚೀನವಾಗಿದ್ದು, ರಾಮಾಯಣದ ಪ್ರಕಾರ ಇದನ್ನು ಸುಗ್ರೀವನ (ಮಂಗಗಳ ರಾಜ) ರಾಜ್ಯ ಕಿಷ್ಕಿಂಧೆ ಎಂದು ನಂಬಲಾಗಿದೆ. ಸಮಯಾವಕಾಶವಿದ್ದರೆ ಪ್ರವಾಸಿಗರು ಖಂಡಿತವಾಗಿಯು ಈ ಸ್ಥಳಕ್ಕೆ ಭೇಟಿ ನೀಡಿ ಅಂಜನಾದ್ರಿ ಬೆಟ್ಟವನ್ನು

Scanned by TapScanner

ನೋಡಬಹುದು. ಈ ಬೆಟ್ಟವನ್ನು ದೇವರಾದ ಹನುಮಂತನ ಹುಟ್ಟು ಸ್ಥಳವೆಂದು ನಂಬಲಾಗಿದೆ. ಹಂಪಿಗಿಂತಲೂ ನೆಮ್ಮದಿಯಾದಂಥ ವಾತಾವರಣವನ್ನು ಆನೆಗುಂಡಿಯು ಹೊಂದಿದೆ. ಪ್ರಾಚ್ಯವಸ್ತು ಸಂರಕ್ಷಣಾ ಯೋಜನೆ ಮತ್ತು ಕಿಷ್ಕಿಂದ ಟ್ರಸ್ಟ್ ಇವುಗಳು, ಇಲ್ಲಿಗೆ ಬರುವ ಪ್ರವಾಸಿಗರಿಗೆ ಅತ್ಯುತ್ತಮವಾದ ವ್ಯವಸ್ಥೆಗಳನ್ನು ಕಲ್ಪಿಸಿದ್ದು, ಆದರಾತಿಥ್ಯವು ಮನಸೂರೆಗೊಳಿಸುತ್ತದೆ. ಹೊಸ ಸೇತುವೆ(ಬ್ರಿಡ್ಜ್) ಅನ್ನು ತುಂಗಭದ್ರಾ ನದಿಗೆ ಕಟ್ಟಲಾಗುತಿತ್ತು , ಆದರೆ ಅದು ಮುರಿದು ಬಿದ್ದಿದ್ದು ಇನ್ನೊಂದು ಕಡೆ ಸೇತುವೆ ಕಟ್ಟುವ ಕೆಲಸ ಪ್ರಗತಿಯಲ್ಲಿದೆ. ಮುಂಬರುವ ದಿನಗಳಲ್ಲಿ, ಪ್ರವಾಸಿಗರು ಆನೆಗುಂಡಿಯನ್ನು ಸುಲಭವಾಗಿ ತಲುಪಬಹುದಾಗಿದೆ. ಸದ್ಯ, ಈ ಪ್ರದೇಶವನ್ನು ಸುತ್ತು ಮಾರ್ಗದಿಂದ ತಲುಪಬಹುದಾಗಿದೆ.

## 18) ಆನೆಗುಂಡಿಯ ಕೆಲವು ಪ್ರಮುಖ ಆಕರ್ಷಣೆಗಳು

ಗಗನ ಪ್ಯಾಲೇಸ್,

ಪಂಪ ಸರೋವರ ಲಕ್ಷ್ಮಿದೇವಾಲಯ,

ಶ್ರೀಕೃಷ್ಣದೇವರಾಯ ಸಮಾಧಿ,

ಆನೆಗುಂಡಿ ಕೋಟೆಯ ಹೆಬ್ಬಾಗಿಲು ಹಾಗು ಏಳು ತಲೆಯ ಸರ್ಪ ಇವು ಆನೆಗುಂಡಿಯ ಕೆಲವು ಪ್ರಮುಖ ಆಕರ್ಷಣೆಗಳು. ಇಷ್ಟೇ ಅಲ್ಲದೆ ಪ್ರವಾಸಿಗರು-

ಶ್ರೀ ಗವಿ ರಂಗನಾಥ ಸ್ವಾಮಿ ದೇವಸ್ಥಾನ,

ಗಣಪತಿ ದೇವಸ್ಥಾನ,

ಚಿಂತಾಮಣಿ ಶಿವ ದೇವಸ್ಥಾನ,

ಹುಚ್ಚಪ್ಪನ ಮಠ ಮತ್ತು ಜೈನ್ ದೇವಾಲಯಗಳಿಗೂ ಕೂಡ ಭೇಟಿ ನೀಡಬಹುದು.

## 19) ಕಮಲಾಪುರದಲ್ಲಿರುವ ಪ್ರಾಚ್ಯವಸ್ತು ಸಂಗ್ರಹಾಲಯ


ಇಲ್ಲಿರುವ ಪ್ರಾಚ್ಯವಸ್ತು ಸಂಗ್ರಹಾಲಯವು, ಹಂಪಿಯ ಎರಡು ಮಾದರಿಗಳನ್ನು ಒಳಗೊಂಡಿದ್ದು, ಈ ಪ್ರದೇಶದ ಸ್ಥಳ ವಿವರಣೆಯನ್ನು ವಿವರವಾಗಿ ತಿಳಿಸುತ್ತದೆ. ಆದ್ದರಿಂದ ಪ್ರವಾಸಿಗರು ಈ ಸ್ಥಳಕ್ಕೆ ಭೇಟಿ ನೀಡಿ ತಮಗೆ ಬೇಕಾದ ಮಾಹಿತಿಯನ್ನು ಸುಲಭವಾಗಿ ತಿಳಿಯುತ್ತಾರೆ. ಸಣ್ಣ ಮಾದರಿಯು ಗ್ಯಾಲರಿಯ ಒಳಭಾಗದಲ್ಲಿದ್ದು ರಾಯಲ್ ಸೆಂಟರನ ವಿಸ್ತಾರವಾದ ವಿವರಗಳನ್ನು ನೀಡುತ್ತದೆ.ಈ ಸಂಗ್ರಹಾಲಯವು ಪ್ರಧಾನವಾಗಿ ನಾಲ್ಕು ಭಾಗಗಳನ್ನು ಹೊಂದಿದೆ. ಮೇಲೆ ವಿವರಿಸಿದ ಹಂಪಿಯ ಮಾದರಿಗಳು ಒಂದನೆ ಭಾಗದಲ್ಲಿದ್ದು, ಎರಡನೆ ಭಾಗವು ಹಂಪಿಯ ಅವಶೇಷಗಳಿಗೆ ಸಂಬಂಧಿಸಿದ ಮೂರ್ತಿಗಳು ಹಾಗು ಶಿಲ್ಪಾಕೃತಿಗಳನ್ನು ಹೊಂದಿದೆ. ಮೂರನೆ ಭಾಗವು ಆಗಿನ ಕಾಲದಲ್ಲಿ ಉಪಯೋಗಿಸಲ್ಪಡುತ್ತಿದ್ದ ಯುದ್ಧ ಸಲಕರಣೆಗಳು,ನಗನಾಣ್ಯಗಳು ಮತ್ತು ಇತರೆ ಸಾಮಗ್ರಿಗಳನ್ನು ಹೊಂದಿದೆ. ನಾಲ್ಕನೆ ಭಾಗವು ಇತಿಹಾಸದ ಪೂರ್ವ ಹಾಗು ನಂತರದ ವಸ್ತುಗಳನ್ನು ಹೊಂದಿದೆ. ಹಿರೊ ಕಲ್ಲುಗಳು, ಸತಿ ಕಲ್ಲುಗಳು,ಚಿಕ್ಕದಾದ ರಾಯಲ್ ಸೆಂಟರ್ ಪ್ರತಿರೂಪ, ಪಿಂಗಾಣಿ ವಸ್ತುಗಳು ಮತ್ತು ಗೋಡೆಯ ಅಲಂಕಾರಿಕ ವಸ್ತುಗಳನ್ನು ಹೊಂದಿದೆ. ಈ ಸಂಗ್ರಹಾಲಯವು ಪ್ರತಿ ಶುಕ್ರವಾರ ಹಾಗು ರಾಷ್ಟ್ರೀಯ ರಜಾ ದಿನಗಳಂದು ಮುಚ್ಚಿರುತ್ತದೆ. ಉಳಿದ ದಿನಗಳಲ್ಲಿ ಇದರ ಸಮಯ ಬೆಳಿಗ್ಗೆ ೧೦ ರಿಂದ ಸಂಜೆ ೫ ರ ವರೆಗೆ. ನೀವು ಹಂಪಿಗೆ ಹೋಗುತ್ತಿರಾದರೆ, ಖಂಡಿತವಾಗಿಯೂ ಇದಕ್ಕೆ ಭೇಟಿ ನೀಡಿ.

Scanned by TapScanner

## 20) ಮಹಾನವಮಿ ದಿಬ್ಬ

ಹಂಪಿಯ ಮತ್ತೊಂದು ಆಕರ್ಷಣೆಯೆಂದರೆ, ಚೌಕಾಕೃತಿಯಲ್ಲಿ ನಿರ್ಮಿತವಾದ ಮಹಾನವಮಿ ದಿಬ್ಬವಾಗಿದ್ದು, ರಾಜನಾದ ಕೃಷ್ಣದೇವರಾಯನು ಉದಯಗಿರಿಯ( ಈಗಿನ ಒರಿಸ್ಸಾದಲ್ಲಿದೆ) ಮೇಲೆ ತನ್ನ ಜಯದ ಸಂಕೇತವಾಗಿ ಇದನ್ನು ನಿರ್ಮಿಸಿದ್ದಾನೆ. ಹಂಪಿಯಲ್ಲೇ ಇದೊಂದು ಎತ್ತರದ ರಚನೆಯಾಗಿದ್ದು, ಸುತ್ತಮುತ್ತಲಿನ ಪ್ರದೇಶಗಳಿಂದ ಇದನ್ನು ಸರಳವಾಗಿ ನೋಡಬಹುದಾಗಿದೆ. ಇದು ತನ್ನ ಕೆತ್ತನೆಯ ಕೆಲಸಕ್ಕೆ ಐತಿಹಾಸಿಕ ಮಹತ್ವವನ್ನು ಪಡೆದಿದ್ದು, ನೋಡಲೇ ಬೇಕಾದ ಸ್ಥಳವಾಗಿದೆ. ಸುಂದರವಾಗಿ ಕೆತ್ತಲಾದ ಕುದುರೆಗಳು, ಸೈನಿಕರು ಮತ್ತು ಆನೆಗಳನ್ನು ಈ ದಿಬ್ಬದ ಮೇಲೆ ಕಾಣಬಹುದು. ಇದರ ಮುಂಭಾಗ ಮತ್ತು ಹಿಂಭಾಗದಲ್ಲಿರುವ ಮೆಟ್ಟಿಲುಗಳ ಮೂಲಕ, ಪ್ರವಾಸಿಗರು ಇದರ ತುದಿಯನ್ನೂ ಕೂಡ ತಲುಪಬಹುದಾಗಿದೆ. ಇದರ ತುದಿಯಲ್ಲಿ ನಿಂತಾಗ, ಸುತ್ತಮುತ್ತಲಿನ ವಿಹಂಗಮ ನೋಟವು ಕಣ್ಮನಸೆಳೆಯುತ್ತದೆ. ಇತಿಹಾಸಕಾರರ ಪ್ರಕಾರ ಅಂದಿನ ರಾಜರುಗಳು, ವಿಶೇಷವಾಗಿ ನವರಾತ್ರಿಯಂದು ಜರುಗುವ ಕಾರ್ಯಕ್ರಮಗಳು, ಮೆರವಣಿಗೆಗಳನ್ನು ನೋಡಲು ಇದನ್ನು ಉಪಯೋಗಿಸುತ್ತಿದ್ದರೆನ್ನಲಾಗಿದೆ. ಕಾಲಕ್ಕನುಗುಣವಾಗಿ ವಿವಿಧ ರಾಜರುಗಳ ಆಡಳಿತದಲ್ಲಿ ಈ ಕಟ್ಟಡವು ವಿಸ್ತರಿಸಿತು ಎಂದು ನಂಬಲಾಗಿದೆ

Scanned by TapScanner





Sca
Scanned by TapScanner
Scanned by TapScanner





Scanned by TapScanner

Scanned by TapScanner





Sc
Scanned by TapScanner
Scanned by TapScanner





Sca
Scanned by TapScanner
Scanned by TapScanner





Sc Scanned by TapScanner
Scanned by TapScanner



Sc
Scanned by TapScanner
Scanned by TapScanner